# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 416

ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 18-02-2022.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ 3 ವರ್ಷಗಳಲ್ಲಿ ಕೋಲಾರ ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯಿತಿಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು) | ಕೋಲಾರ ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯಿತಿಗಳಿಗೆ ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾದ, ಖರ್ಚಾದ ಅನುದಾನದ ಗ್ರಾಮ ಪಂಚಾಯಿತಿವಾರು ವಿವರವನ್ನು ಸಿ.ಡಿ. ಯಲ್ಲಿ ನೀಡಿದೆ. |
| (ಆ) | ಸರ್ಕಾರದ ಯಾವ ಯಾವ ಕಾರ್ಯಕ್ರಮ/ಯೋಜನೆಗಳು ಗ್ರಾಮ ಪಂಚಾಯಿತಿಗಳ ಮೂಲಕ ಜಾರಿಗೆ ಬರುತ್ತಿವೆ ಈ ಕಾರ್ಯಕ್ರಮ/ಯೋಜನೆಗಳಿಗಾಗಿ ಕಳೆದ 3 ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವೆಷ್ಟು; ಇದರಲ್ಲಿ ಖರ್ಚಾದ ಅನುದಾನವೆಷ್ಟು; (ಫಲಾನುಭವಿಗಳ ವಿವರಗಳೊಂದಿಗೆ ಗ್ರಾಮ ಪಂಚಾಯಿತಿವಾರು ವಿವರ ನೀಡುವುದು) | ಗ್ರಾಮ ಪಂಚಾಯತಿಗಳ ಮೂಲಕ ಈ ಕೆಳಕಂಡ ಪ್ರಮುಖ ಯೋಜನೆಗಳು/ ಕಾರ್ಯಕ್ರಮಗಳು ಜಾರಿಯಾಗುತ್ತಿವೆ.<br>ಕ್ರ.ಸಂ. — ಯೋಜನೆಗಳು /ಕಾರ್ಯಕ್ರಮಗಳು<br>1 — ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ<br>2 — ಸ್ವಚ್ಛ ಭಾರತ ಅಭಿಯಾನ<br>3 — ಗ್ರಾಮೀಣ ನೀರು ಸರಬರಾಜು (ಜಲ ಜೀವನ್ ಮಿಷನ್)<br>4 — ಮುಖ್ಯಮಂತ್ರಿ ಗ್ರಾಮ ವಿಕಾಸ<br>5 — ಕೇಂದ್ರ ಹಣಕಾಸು ಆಯೋಗದ ಅನುದಾನ<br>6 — ಗ್ರಾಮ ಪಂಚಾಯಿತಿ ಅಭಿವೃದ್ಧಿ ಅನುದಾನ<br>ಗ್ರಾಮ ಪಂಚಾಯಿತಿವಾರು ಪೂರ್ಣ ವಿವರವನ್ನು ಸಿ.ಡಿ. ಯಲ್ಲಿ ನೀಡಿದೆ. |
| (ಇ) | ಕಳೆದ 3 ವರ್ಷಗಳಲ್ಲಿ ಈ ಗ್ರಾಮ ಪಂಚಾಯಿತಿಗಳು ಕರಗಳ ರೂಪದಲ್ಲಿ ಸಾರ್ವಜನಿಕರಿಂದ ಸ್ವೀಕರಿಸಿರುವ ಆದಾಯವೆಷ್ಟು; ಈ ಆದಾಯವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ? (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು) | ಕರದ ರೂಪದಲ್ಲಿ ವಸೂಲಾತಿಯಾದ ಆದಾಯವನ್ನು ಗ್ರಾಮ ಪಂಚಾಯತಿಯ ನೌಕರರ ವೇತನ, ವಿದ್ಯುಚ್ಛಕ್ತಿ ಬಿಲ್, ದೂರವಾಣಿ ವೆಚ್ಚ ಹಾಗೂ ಗ್ರಾಮ ಪಂಚಾಯತಿ ಮೂಲ ಸೌಕರ್ಯಗಳು ಮತ್ತು ಸಾರ್ವಜನಿಕ ಉಪಯೋಗಕ್ಕಾಗಿ ವೆಚ್ಚ ಭರಿಸಲಾಗಿರುತ್ತದೆ.<br>ಗ್ರಾಮ ಪಂಚಾಯಿತಿವಾರು ಸ್ವೀಕೃತವಾದ ಕರದ ವಿವರವನ್ನು ಸಿ.ಡಿ. ಯಲ್ಲಿ ನೀಡಿದೆ. |

ಸಂ. ಗ್ರಾಅಪ 34 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು